**ಕರ್ನಾಟಕ ಸರ್ಕಾರ**

ಸಂ. ಕಂಇ 158 ಟಿಎನ್‌ಆರ್ 2020(ಭಾ1)

ಕರ್ನಾಟಕ ಸರ್ಕಾರಿ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 21-05-2020

**<u>ಸ್ಪಷ್ಟೀಕರಣ</u>**

ರಾಜ್ಯ ಸರ್ಕಾರವು ಆದೇಶ ಸಂಖ್ಯೆ ಕಂಇ 158 ಟಿಎನ್‌ಆರ್ 2020, ದಿ.18.05.2020ರಂದು ಕೋವಿಡ್- 19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಲಾಕ್‌ಡೌನ್ ಕ್ರಮಗಳ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಇವುಗಳು ರಾಜ್ಯಾದ್ಯಂತ ದಿ.18.05.2020 ರಿಂದ ದಿ.31.05.2020 ರವರೆಗೆ ಜಾರಿಯಲ್ಲಿರುತ್ತವೆ.

ಸದರಿ ಆದೇಶದ ಮಾರ್ಗಸೂಚಿಗಳ ಕ್ರಮ ಸಂ.6 **(ಕರ್ಫ್ಯೂ)** ರಲ್ಲಿ, ಈ ಕೆಳಕಂಡಂತಿರುತ್ತದೆ:

> "ಪ್ರತಿ ದಿನ ರಾತ್ರಿ 7.00 ರಿಂದ ಬೆಳಿಗ್ಗೆ 7.00ರವರೆಗೆ ಎಲ್ಲಾ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ಕಟ್ಟುನಿಟ್ಟಾಗಿ ನಿಷೇಧಿಸತಕ್ಕದ್ದು. ಭಾನುವಾರದಂದು ಹೆಚ್ಚುವರಿಯಾಗಿ ಬೆಳಿಗ್ಗೆ 7.00 ರಿಂದ ಸಂಜೆ 7.00 ರವರೆಗೆ ಸಹ ಎಲ್ಲಾ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ನಿಷೇಧಿಸಿದೆ (**ಭಾನುವಾರದಂದು ಪೂರ್ಣ ದಿನದ ಲಾಕ್‌ಡೌನ್ ಇರುತ್ತದೆ**). ಈ ಉದ್ದೇಶಕ್ಕಾಗಿ Cr.P.C section 144 ರಡಿಯಲ್ಲಿ ನಿಷೇಧಾತ್ಮಕ ಆದೇಶ (ಕರ್ಫ್ಯೂ)ವನ್ನು ಸ್ಥಳೀಯ ಪ್ರಾಧಿಕಾರಗಳ ವತಿಯಿಂದ ಆದೇಶಗಳನ್ನು ಹೊರಡಿಸಿ, ಕಟ್ಟುನಿಟ್ಟಿನ ಅನುಪಾಲಯನೆಯನ್ನು ಖಾತರಿಪಡಿಸತಕ್ಕದ್ದು."

ಅನೇಕ ಸಾರ್ವಜನಿಕರು ಭಾನುವಾರದಂದು ಪೂರ್ಣ ದಿನದ ಲಾಕ್ ಡೌನ್ ಇರುವ ಹಿನ್ನಲೆಯಲ್ಲಿ ಈಗಾಗಲೇ ನಿಗದಿಪಡಿಸಿರುವಂತಹ ಮದುವೆ ಸಮಾರಂಭಗಳನ್ನು ನಡೆಸಲು ಸ್ಪಷ್ಟೀಕರಣ/ಅನುಮತಿ ನೀಡುವಂತೆ ಕೋರಿರುತ್ತಾರೆ.

ಮೇಲಿನ ಉಲ್ಲೇಖಿತ ಆದೇಶದಲ್ಲಿ "ಭಾನುವಾರದಂದು ಪೂರ್ಣ ದಿನದ ಲಾಕ್‌ಡೌನ್" ಎಂದು ಆದೇಶಿಸಲಾಗಿರುತ್ತದೆ. ಆದರೆ ಮದುವೆ ಸಮಾರಂಭಗಳು ಈ ಹಿಂದೆಯೇ ನಿಗಧಿಪಡಿಸಿರುವ ಹಿನ್ನಲೆಯಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ, ಸಾಮಾಜಿಕ ಅಂತರವನ್ನು ಖಾತರಿಪಡಿಸಿಕೊಂಡು, ಗರಿಷ್ಠ ಅತಿಥಿಗಳ ಸಂಖ್ಯೆಯನ್ನು 50ಕ್ಕೆ ಸೀಮಿತಗೊಳಿಸಿ, ರಾಷ್ಟ್ರೀಯ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ, ಸರಳವಾಗಿ ಮದುವೆ ಸಮಾರಂಭವನ್ನು ನಡೆಸಲು ಈ ಮೂಲಕ ಅನುಮತಿಸಲಾಗಿದೆ ಎಂದು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸ್ಪಷ್ಟಪಡಿಸಲಾಗಿದೆ. ಇದಲ್ಲದೇ ಭಾನುವಾರದಂದು ಅವಶ್ಯ ಚಟುವಟಿಕೆಗಳಿಗೂ (essential activities) ಅವಕಾಶವಿರುವುದನ್ನು ಗಮನಿಸುವುದು.

21/5

**(ಟಿ.ಕೆ.ಅನಿಲ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ರಾಜ್ಯ ಕಾರ್ಯಕಾರಿ ಸಮಿತಿ

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.